**Bangalore**
**Regional News**
**01.10.2025 / 2.30 pm**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಮೈಸೂರು ಅರಮನೆ ಸೇರಿದಂತೆ ನಾಡಿನೆಲ್ಲೆಡೆ ಆಯುಧಪೂಜೆ ಸಂಭ್ರಮ; ಗಣ್ಯರಿಂದ ಶುಭಾಶಯ

೨. ವಿಶ್ವವಿಖ್ಯಾತ ಜಂಬೂಸವಾರಿಗೆ ಕ್ಷಣಗಣನೆ; ಸಾಂಸ್ಕೃತಿಕ ನಗರಿಯಲ್ಲಿ ಡ್ರೋನ್ ಕಣ್ಗಾವಲು

೩. ಸಮಾಜದಲ್ಲಿನ ಅಸಮಾನತೆ ಹೋಗಲಾಡಿಸಲು ಸಮೀಕ್ಷೆ ಅತ್ಯಗತ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ

೪. ಜಿಎಸ್‌ಟಿ ಕಡಿತದಿಂದ ದೇಶದಲ್ಲಿ ಖರೀದಿದಾರರ ಸಂಖ್ಯೆ ಹೆಚ್ಚಳ - ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

*****************

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ದಸರಾ ಸಂಭ್ರಮ ಮನೆ ಮಾಡಿದೆ. ವಿಜಯ ದಶಮಿಗೆ ಇನ್ನು ಒಂದೇ ದಿನ ಬಾಕಿ ಇದೆ. ಅಂಬಾ ವಿಲಾಸ ಅರಮನೆಯಲ್ಲಿ ಇಂದು ವಿಶಿಷ್ಟ ರೀತಿಯಲ್ಲಿ ಆಯುಧ ಪೂಜೆಯನ್ನು ನೆರವೇರಿಸಲಾಗಿದೆ. ಅರಮನೆ ಆವರಣದ ಸವಾರಿ ತೊಟ್ಟಿ ಆವರಣದಲ್ಲಿ ಯದುಕುಲ ರಾಜವಂಶಸ್ಥರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ರಾಜಪೋಷಕಿನೊಂದಿಗೆ ಆಗಮಿಸಿ ಮೊದಲು ಯುದ್ಧಕ್ಕೆ ಬಳಸುತ್ತಿದ್ದ ಕತ್ತಿ, ಗುರಾಣಿ, ಬಂದೂಕು, ಸಶಾಸ್ತ್ರಗಳಿಗೆ ಪೂಜೆ ಸಲ್ಲಿಸಿದರು. ಬಳಿಕ ತಮ್ಮ ಪಟ್ಟದ ಹಸು, ಪಟ್ಟದ ಕುದುರೆ, ಪಟ್ಟದ ಆನೆ, ಪಟ್ಟದ ಒಂಟೆ ಹಾಗೂ ಚಿನ್ನದ ಪಲ್ಲಕ್ಕಿ, ಬೆಳ್ಳಿಯ ಪಲ್ಲಕ್ಕಿ ಹಾಗೂ ಐಷರಾಮಿ ಕಾರುಗಳಿಗೂ ಪೂಜೆ ಸಲ್ಲಿಸಿದರು. ಪೊಲೀಸ್ ಸಮೂಹ ವಾದ್ಯವೃಂದದಿಂದ ಸಂಗೀತ ಲಹರಿ ನುಡಿಸಲಾಯಿತು.

*****************

ಮಹಾನವಮಿ ಹಾಗೂ ಆಯುಧ ಪೂಜೆಯ ಪ್ರಯುಕ್ತ ನಾಡಿನ ಸಮಸ್ತ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಶುಭಾಶಯಗಳನ್ನು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಮೈಸೂರಿನಲ್ಲಿ ನಡೆಯಲಿರುವ ದಸರಾ ಮಹೋತ್ಸವದ ಕಾರ್ಯಕ್ರಮಗಳಲ್ಲಿ ಭಾಗಿಯಾಗುವುದಾಗಿ ಹೇಳಿದ್ದಾರೆ. ಕೇಂದ್ರ ಸಚಿವ ಹೆಚ್. ಡಿ.

ಕುಮಾರಸ್ವಾಮಿ ನಾಡಿನ ಜನತೆಗೆ ಸುಖಶಾಂತಿ, ನೆಮ್ಮದಿ, ಸಮೃದ್ಧಿ ತುಂಬಲಿ ಎಂದು ಹಾರೈಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನಾಡಿನ ಸಮಸ್ತ ಜನತೆಗೆ ಮಹಾನವಮಿ ಹಾಗೂ ಆಯುಧ ಪೂಜೆಯ ಹಾರ್ಧಿಕ ಶುಭಾಶಯ ತಿಳಿಸಿದ್ದಾರೆ.

*****************

ರಾಜ್ಯದ ಇತರೆಡೆಗಳಲ್ಲಿಯೂ ಆಯುಧ ಪೂಜೆಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಹಾನವಮಿ ದಿನವಾದ ಇಂದು ಸಾರ್ವಜನಿಕರು ಮನೆಯಲ್ಲಿನ ಯಂತ್ರಗಳು, ವಾಹನಗಳು ಹಾಗೂ ವಿವಿಧ ವಾಣಿಜ್ಯ ಸಾಮಗ್ರಿಗಳಿಗೆ ಪೂಜೆ ಸಲ್ಲಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ನೇಕಾರಿಕೆಯೇ ಪ್ರಧಾನವಾಗಿರುವ ದೊಡ್ಡಬಳ್ಳಾಪುರದಲ್ಲಿ ಮಗ್ಗಗಳಿಗೆ ಹಾಗೂ ಮಗ್ಗದ ಪರಿಕರಗಳಿಗೆ ವಿಶೇಷವಾಗಿ ಪೂಜೆ ಸಲ್ಲಿಸಲಾಯಿತು. ದಾವಣಗೆರೆ ಜಿಲ್ಲೆಯಲ್ಲಿ ಆಯುಧ ಪೂಜೆಯ ಭಾಗವಾಗಿ ಬೆಳಿಗ್ಗೆಯಿಂದಲೂ ಜನರು ವಾಹನಗಳನ್ನು ತೊಳೆದು ಹೂವು, ಬಾಳೆಕಂದುಗಳನ್ನು ಕಟ್ಟಿ ಪೂಜೆ ಸಲ್ಲಿಸುತ್ತಿರುವುದು ಸಾಮಾನ್ಯವಾಗಿದೆ. ಕೋಲಾರ ಜಿಲ್ಲೆಯಾದ್ಯಂತ ಆಯುಧ ಪೂಜೆಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಮನೆ ಮನೆಗಳಲ್ಲಿ ವಾಹನಗಳು, ಅಂಗಡಿ ಮುಗ್ಗಟ್ಟುಗಳು ಹಾಗೂ ಆಯುಧಗಳನ್ನಿಟ್ಟು ಪೂಜೆ ಸಲ್ಲಿಸಲಾಯಿತು.

*****************

ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿ ವಿಜಯ ದಶಮಿಯಾದ ನಾಳೆ ನೆರವೇರಲಿದೆ. ಜಂಬೂ ಸವಾರಿ ಕಣ್ತುಂಬಿಕೊಳ್ಳಲು ಲಕ್ಷಾಂತರ ಮಂದಿ ಕಾತುರರಾಗಿದ್ದು ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ನಾಳೆ ಮಧ್ಯಾಹ್ನ ೧ ರಿಂದ ೧.೧೮ ರವರೆಗೆ ಸಲ್ಲುವ ಧನುರ್ ಲಗ್ನದಲ್ಲಿ ಅರಮನೆ ಬಲರಾಮ ದ್ವಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಂದೀ ಧ್ವಜಕ್ಕೆ ಪೂಜೆ ನೆರವೇರಿಸಿ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಸಂಜೆ ೪.೪೨ರಿಂದ ೫ ಗಂಟೆ ೬ ನಿಮಿಷಕ್ಕೆ ಸಲ್ಲುವ ಶುಭ ಕುಂಭ ಲಗ್ನದಲ್ಲಿ ಜಂಬೂಸವಾರಿಗೆ ಚಿನ್ನದ ಅಂಬಾರಿಯಲ್ಲಿ ವಿರಾಜಮಾನಗೊಂಡ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮೂಲಕ ಚಾಲನೆ ನೀಡಲಿದ್ದಾರೆ. ಆರನೇ ಬಾರಿಗೆ ಕ್ಯಾಪ್ಟನ್ ಅಭಿಮನ್ಯು ಅಂಬಾರಿ ಹೊತ್ತು ಬನ್ನಿ ಮಂಟಪದ ವರೆಗೆ ಸಾಗಲಿದೆ. ಕಾವೇರಿ ಮತ್ತು ರೂಪಾ ಕುಮ್ಕಿ ಆನೆಗಳಾಗಿ ಸಾಥ್ ನೀಡಲಿವೆ. ನಿಶಾನೆ ಆನೆಯಾಗಿ ಧನಂಜಯ ಹಾಗೂ ನೌಪತ್ ಆನೆಯಾಗಿ ಗೋಪಿ ಮುನ್ನಡೆಯಲಿದೆ. ಈ ಬಾರಿ ಮೆರವಣಿಗೆಯಲ್ಲಿ ೫೮ ಸ್ತಬ್ಧ ಚಿತ್ರಗಳು ೧೨೫ಕ್ಕೂ ಹೆಚ್ಚು ಕಲಾತಂಡಗಳು ೧೪ ಆನೆಗಳು ಅಶ್ವಾರೋಹಿ ಪಡೆಗಳು ಭಾಗವಹಿಸಲಿವೆ. ಭದ್ರತೆಯ ದೃಷ್ಟಿಯಿಂದ ಈ ಬಾರಿ ಡ್ರೋನ್ ಕಣ್ಗಾವಲು ಇರಲಿದೆ. ಈಗಾಗಲೇ ಇರುವ ೩೦ ಸಾವಿರದ ೬೧೪ ಸಿಸಿಟಿವಿ ಕ್ಯಾಮೆರಗಳ ಜೊತೆಗೆ ಹೆಚ್ಚುವರಿಯಾಗಿ ೨೦೦ ಸಿಸಿಟಿವಿ

ಕ್ಯಾಮೆರಗಳನ್ನು ಅಳವಡಿಸಲಾಗಿದೆ. ಜಂಬೂಸವಾರಿ ಮುಗಿದ ಬಳಿಕ ರಾತ್ರಿ ೭ ಗಂಟೆಗೆ ಬನ್ನಿ ಮಂಟಪ ಮೈದಾನದಲ್ಲಿ ಪಂಜಿನ ಕವಾಯತು ನಡೆಯಲಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕವಾಯತು ವೀಕ್ಷಿಸಿ ಗೌರವ ವಂದನೆ ಸ್ವೀಕರಿಸಲಿದ್ದಾರೆ.

*****************

ಸಮಾಜದಲ್ಲಿ ಅಸಮಾನತೆಯಿದ್ದು, ಅದನ್ನು ಹೋಗಲಾಡಿಸಲು ಸಮೀಕ್ಷೆಯ ಅಂಕಿ ಅಂಶಗಳು ಅವಶ್ಯಕವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಜಾತಿಯ ಜನರಲ್ಲಿ ಅನಕ್ಷರತೆ, ಬಡತನ, ಜಮೀನು ಇತ್ಯಾದಿಗಳಿಲ್ಲ ಎಂಬುದರ ಮಾಹಿತಿ ಅಗತ್ಯ ಎಂದು ಹೇಳಿದ್ದಾರೆ. ಉತ್ತರ ಕರ್ನಾಟಕದ ಸುಮಾರು ೯ ಜಿಲ್ಲೆಗಳಲ್ಲಿ ಶೇಕಡಾ ೯೫ ರಷ್ಟು ಪ್ರವಾಹ ಸಂಭವಿಸಿದ್ದು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಯವರು ಪ್ರವಾಹ ಪರಿಹಾರವನ್ನು ಕೇಂದ್ರದಿಂದ ಕೊಡಿಸುವುದಾಗಿ ತಿಳಿಸಿರುವುದನ್ನು ಸ್ವಾಗತಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರಿನ ಎಂ.ಎಸ್. ರಾಮಯ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ಆರೋಗ್ಯ ವಿಚಾರಿಸಿದ ಅವರು, ಖರ್ಗೆ ಅವರ ಆರೋಗ್ಯ ಉತ್ತಮವಾಗಿದೆ ಎಂದು ತಿಳಿಸಿದ್ದಾರೆ.

*****************

ರಾಜ್ಯದ ಎಲ್ಲೆಡೆ ಸಾಮಾಜಿಕ ಆರ್ಥಿಕ ಸಮೀಕ್ಷೆ ಮುಂದುವರೆದಿದೆ. ಜಿಲ್ಲೆಯ ಎಲ್ಲಾ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ವಯಂ ಘೋಷಣೆ ಮೂಲಕ ಆನ್‌ಲೈನ್‌ನಲ್ಲಿ ಸಮೀಕ್ಷೆಯಲ್ಲಿ ಭಾಗವಹಿಸುವಂತೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಕರೆ ನೀಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ವರ್ಚುವಲ್ ಮೂಲಕ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆನ್‌ಲೈನ್ ಲಿಂಕ್ ಬಳಸಿ ಸಮೀಕ್ಷೆಯಲ್ಲಿ ಭಾಗವಹಿಸುವ ಕುರಿತ ಪ್ರಕ್ರಿಯೆಗಳ ಕುರಿತಂತೆ ಆಕ್ಟೋಬರ್ ೩ರಂದು ಎಲ್ಲಾ ಇಲಾಖೆಗಳು ವರದಿ ಸಲ್ಲಿಸಬೇಕು ಎಂದು ಸೂಚಿಸಿದ್ದಾರೆ. ಸಾರ್ವಜನಿಕರೂ ಕೂಡಾ ಆನ್‌ಲೈನ್ ಲಿಂಕ್ ಬಳಸಿ ಈ ಸಮೀಕ್ಷೆಯಲ್ಲಿ ಭಾಗವಹಿಸಬಹುದಾಗಿದ್ದು, ಪ್ರತಿಯೊಬ್ಬರೂ ಸಹಕರಿಸುವಂತೆ ಮನವಿ ಮಾಡಿದ್ದಾರೆ. ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಗೆ ರಾಮನಗರ, ಜಿಲ್ಲೆಯಲ್ಲಿ ಗುರುತಿಸಲಾದ ೩.೪ ಲಕ್ಷಕ್ಕೂ ಹೆಚ್ಚಿನ ಮನೆಗಳಿಗೆ ಗಣತಿದಾರರು ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ ನಿಗದಿತ ಅವಧಿಯೊಳಗೆ ಸಮೀಕ್ಷಾ

ಕಾರ್ಯವನ್ನು ಪೂರ್ಣಗೊಳಿಸಲೂ ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಶ್ಮಿ ಮಹೇಶ್ ತಿಳಿಸಿದ್ದಾರೆ. ಅಕ್ಟೋಬರ್ ೭ ರೊಳಗೆ ಈ ಸಮೀಕ್ಷಾ ಕಾರ್ಯ ಪೂರ್ಣಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಮಾತನಾಡಿ, ಸಮೀಕ್ಷಾ ಕಾರ್ಯಕ್ಕೆ ಗೈರು ಹಾಜರಾಗಿದ್ದ ಇಬ್ಬರನ್ನು ಈಗಾಗಲೇ ವಜಾ ಮಾಡಲಾಗಿದೆ ಎಂದು ಹೇಳಿದ್ದಾರೆ.

*****************

ಜಿಎಸ್‌ಟಿ ಕಡಿಮೆಯಾದ ಬಳಿಕ ದೇಶದಲ್ಲಿ ಖರೀದಿದಾರರ ಸಂಖ್ಯೆ ಹೆಚ್ಚಳವಾಗಿದೆ ಎಂದು ಕೇಂದ್ರ ಸಣ್ಣ ಮತ್ತು ಮಧ್ಯಮ ಕೈಗಾರಿಕೆ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ. ಮೈಸೂರಿನಲ್ಲಿ ಇಂದು ಅವರು, ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಜಂಬೂ ಸವಾರಿಯ ಗಜಪಡೆಗಳ ಮಾವುತರ ಹಾಗೂ ಕಾವಾಡಿಗಳೊಂದಿಗೆ ಉಪಹಾರದಲ್ಲಿ ಪಾಲ್ಗೊಂಡರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾವುತರಿಗೆ ವೇತನದಲ್ಲಿ ತಾರತಮ್ಯವಿದ್ದರೆ ರಾಜ್ಯ ಸರ್ಕಾರದೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ.

*****************

ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ೨೦೨೫-೨೬ನೇ ಸಾಲಿನಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಮುಂಗಾರು ಹಂಗಾಮಿನ ಹೆಸರು ಕಾಳು, ಉದ್ದು ಹಾಗೂ ಸೂರ್ಯಕಾಂತಿ ಉತ್ಪನ್ನ ಖರೀದಿಸಲು ಯಾದಗಿರಿ ಜಿಲ್ಲೆಯಲ್ಲಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸರಕಾರದ ಈ ಯೋಜನೆಯ ಸದುಪಯೋಗಪಡಿಸಿಕೊಳ್ಳುವಂತೆ ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ. ರೈತರ ನೋಂದಣಿ ಕಾಲಾವಧಿಯನ್ನು ೮೦ ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು ೯೦ ದಿನಗಳವರೆಗೆ ನಿಗದಿಪಡಿಸಲಾಗಿದೆ ಎಂದು ಹೇಳಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಸೋಯಾಬಿನ್ ಹಾಗೂ ಶೇಂಗಾ ಉತ್ಪನ್ನ ಖರೀದಿ ಕೇಂದ್ರಗಳನ್ನು ಜಿಲ್ಲೆಯ ವಿವಿಧ ತಾಲೂಕು ಕೇಂದ್ರಗಳಲ್ಲಿ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಸ್ಪಷ್ಟಪಡಿಸಿದ್ದಾರೆ.

*****************